# ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ

ನಂ:1/14, ನೆಲ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ.ಕಾಂಪೌಂಡ್,
3ನೇ ಕ್ರಾಸ್, ಮಿಷನ್ ರಸ್ತೆ, ಬೆಂಗಳೂರು–560027


ಸ್ವಾತಂತ್ರ್ಯದ ಅಮೃತ ಮಹೋತ್ಸವ | Azadi Ka Amrit Mahotsav

ಸಂಖ್ಯೆ: ರೇರಾ/ಆಡಳಿತ/29/2022-23 ದಿನಾಂಕ: 8/8/2022

## ಸುತ್ತೋಲೆ

## ಸ್ವಾತಂತ್ರ್ಯದ ಅಮೃತ ಮಹೋತ್ಸವದ "ಹರ್ ಘರ್ ತಿರಂಗಾ" ಅಭಿಯಾನ ಕಾರ್ಯಕ್ರಮ

ದೇಶಾದ್ಯಂತ ಭಾರತ ಸ್ವಾತಂತ್ರ್ಯದ 75ರ ಸಂಭ್ರಮವನ್ನು ವೈವಿಧ್ಯಮಯವಾಗಿ ಆಚರಿಸಲಾಗುತ್ತಿದೆ. ಈ ಸಂಭ್ರಮದ ಒಂದು ಭಾಗವಾಗಿ ಕೇಂದ್ರ ಸರ್ಕಾರವು "ಹರ್ ಘರ್ ತಿರಂಗಾ" ಎಂಬ ಘೋಷವಾಕ್ಯದೊಂದಿಗೆ 2022ರ ಆಗಸ್ಟ್ 11 ರಿಂದ 17ರವರೆಗೆ ದೇಶದ ಪ್ರತಿ ಮನೆ-ಮನೆಯಲ್ಲೂ ರಾಷ್ಟ್ರಧ್ವಜವನ್ನು ಹಾರಿಸಿ ದೇಶಭಕ್ತಿ ಬಿಂಬಿಸುವ ಮೂಲಕ ನಮ್ಮ ರಾಷ್ಟ್ರ ಪ್ರೇಮವನ್ನು ಅಭಿವ್ಯಕ್ತಿಗೊಳಿಸಿ ದಾಖಲಿಸುವಂತೆ ಕರೆ ನೀಡಿ ಅಭಿಯಾನ ಹಮ್ಮಿಕೊಂಡಿದೆ.

ಅಸಂಖ್ಯಾತ ಹೋರಾಟ, ತ್ಯಾಗ, ಬಲಿದಾನಗಳ ಕಾರಣದಿಂದ ದಾಸ್ಯದ ಸಂಕೋಲೆಯಿಂದ ಬಿಡುಗಡೆಯಾದ ಭಾರತಾಂಬೆಗೆ ಪ್ರಾಪ್ತಿಯಾದ ಸ್ವಾತಂತ್ರ್ಯಕ್ಕೆ ಈಗ ಅಮೃತ ಮಹೋತ್ಸವದ ಸಂಭ್ರಮ. ಈ ಸಂದರ್ಭದಲ್ಲಿ ಅದಕ್ಕೆ ಕಾರಣವಾದ ಎಲ್ಲರನ್ನು ಸದಾ ಸ್ಮರಿಸುವುದು ಹಾಗೂ ಗೌರವಿಸುವುದು ನಮ್ಮ ಆದ್ಯ ಕರ್ತವ್ಯವಾಗಿದೆ. "ಇತಿಹಾಸ ಮರೆತವರು ಇತಿಹಾಸ ಸೃಷ್ಟಿಸಲಾರರು" ಎಂಬ ಮಾತಿನಂತೆ ಇಂದಿನ ನಮ್ಮ ಸಂಭ್ರಮಕ್ಕೆ ತಳಪಾಯವಾಗಿ, ಮೆಟ್ಟಿಲುಗಳಾಗಿ ತಮ್ಮ ಜೀವ-ಜೀವನ ತ್ಯಾಗ ಮಾಡಿದ ಎಲ್ಲರನ್ನು ಮರೆಯದೆ ಸದಾ ಸ್ಮರಿಸುತ್ತಾ ಭವ್ಯ ಭಾರತವನ್ನು ಕಟ್ಟುವಲ್ಲಿ ನಮ್ಮ ಜವಾಬ್ದಾರಿಯುತ ಪಾತ್ರವನ್ನು ನಿರ್ವಹಿಸಬೇಕಿದೆ. ಕೇಂದ್ರ

ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ
ನಂ:1/14, ನೆಲ ಮಹಡಿ, ಸಿಲ್ವರ್ ಜ್ಯೂಬಿಲಿ ಬ್ಲಾಕ್, ಯುನಿಟಿ ಬಿಲ್ಡಿಂಗ್, ಸಿ.ಎಸ್.ಐ.ಕಾಂಪೌಂಡ್,
3ನೇ ಕ್ರಾಸ್, ಮಿಷನ್ ರಸ್ತೆ, ಬೆಂಗಳೂರು-560027

ಸರ್ಕಾರದ "ಹರ್ ಘರ್ ತಿರಂಗಾ" ಅಡಿಯಲ್ಲಿ ರಾಷ್ಟ್ರ ಧ್ವಜಕ್ಕೆ ಸಂಬಂಧಿಸಿದಂತೆ ಬ್ಯಾನರ್ ಮತ್ತು ಪೋಸ್ಟರ್ ಮಾದರಿಗಳು ಲಭ್ಯವಿದ್ದು ಅವುಗಳ ಉಪಯೋಗ ಪಡೆದುಕೊಳ್ಳುವಂತೆ ತಿಳಿಸಿದೆ.

ಈ ಹಿನ್ನೆಲೆಯಲ್ಲಿ ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಕಾರ್ಯ ನಿರ್ವಹಿಸುತ್ತಿರುವ ಪ್ರತಿಯೊಬ್ಬ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು, ರಿಯಲ್ ಎಸ್ಟೇಟ್ ಯೋಜನೆಗಳ ಪ್ರವರ್ತಕರು / ಅಭಿವೃದ್ಧಿದಾರರು ಮತ್ತು ರಿಯಲ್ ಎಸ್ಟೇಟ್ ಏಜೆಂಟರುಗಳು ಈ ಸಂಭ್ರಮದ ಒಂದು ಭಾಗವಾಗಿ 2022ರ ಆಗಸ್ಟ್ 11 ರಿಂದ 17ರವರೆಗೆ ದೇಶದ ಪ್ರತಿ ಮನೆ-ಮನೆಯಲ್ಲೂ ರಾಷ್ಟ್ರಧ್ವಜವನ್ನು ಹಾರಿಸಿ ದೇಶಭಕ್ತಿ ಬಿಂಬಿಸುವ ಮೂಲಕ ನಮ್ಮ ರಾಷ್ಟ್ರ ಪ್ರೇಮವನ್ನು ಅಭಿವ್ಯಕ್ತಿಗೊಳಿಸುವ ಮೂಲಕ "ಹರ್ ಘರ್ ತಿರಂಗಾ" ಅಭಿಯಾನ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಕೋರಿದೆ.

(ಹೆಚ್.ಸಿ. ಕಿಶೋರ್ ಚಂದ್ರ)
ಅಧ್ಯಕ್ಷರು
ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರ
ಬೆಂಗಳೂರು

ಇವರಿಗೆ:

1) ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ ಹಾಗೂ ಸಿಬ್ಬಂದಿ ವರ್ಗದವರು,
2) ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೋಂದಣಿಯಾಗಿರುವ ಎಲ್ಲಾ ರಿಯಲ್ ಎಸ್ಟೇಟ್ ಯೋಜನೆಗಳ ಪ್ರವರ್ತಕರು / ಅಭಿವೃದ್ಧಿದಾರರು
3) ಕರ್ನಾಟಕ ರಿಯಲ್ ಎಸ್ಟೇಟ್ ನಿಯಂತ್ರಣ ಪ್ರಾಧಿಕಾರದಲ್ಲಿ ನೋಂದಣಿಯಾಗಿರುವ ಎಲ್ಲಾ ರಿಯಲ್ ಎಸ್ಟೇಟ್ ಏಜೆಂಟರುಗಳು

ದೂರವಾಣಿ ಸಂಖ್ಯೆ:080-22249798/ 22249799 / ಇ-ಮೇಲ್: info.rera@karnataka.gov.in ವೆಬ್‌ಸೈಟ್: rera.karnataka.gov.in